**All India Radio: Bangalore**
**National Bulletin In Kannada**
**10.10.2025 1.10 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**10.10.2025 1.10 p.m.**
**<><><><>**

ಮುಖ್ಯಾಂಶಗಳು

1. ಭಾರತದ ರಕ್ಷಣಾ ಉತ್ಪಾದನಾ ಪರಿಸರ ವ್ಯವಸ್ಥೆ ನಿರಂತರವಾಗಿ ಉದಾರೀಕರಣ- ರಕ್ಷಣಾ ಸಚಿವ ರಾಜನಾಥ್ ಸಿಂಗ್
2. ಬಿಹಾರ ವಿಧಾನಸಭಾ ಚುನಾವಣೆ: ಅಧಿಸೂಚನೆ ಪ್ರಕಟಿಸಿದ ಚುನಾವಣಾ ಆಯೋಗ
3. ವಿಶ್ವ ಸಂರಕ್ಷಣಾ ಶೃಂಗಸಭೆ: ಐದು ವರ್ಷಗಳ ರಾಷ್ಟ್ರೀಯ ಕೆಂಪು ಪಟ್ಟಿ ಮಾರ್ಗಸೂಚಿ ಪ್ರಕಟಿಸಿದ ಭಾರತ
4. ಟೆಸ್ಟ್ ಕ್ರಿಕೆಟ್: ವೆಸ್ಟ್ ಇಂಡೀಸ್ ವಿರುದ್ಧ ಟಾಸ್ ಗೆದ್ದ ಭಾರತ ಬ್ಯಾಟಿಂಗ್ ಆಯ್ಕೆ

<><><><>

ಭಾರತದ ರಕ್ಷಣಾ ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ವಿವಿಧ ನೀತಿ ಮಧ್ಯಸ್ಥಿಕೆಗಳು ಮತ್ತು ಅನುಸರಣೆಗಳ ಮೂಲಕ ನಿರಂತರವಾಗಿ ಉದಾರೀಕರಣಗೊಳಿಸಲಾಗುತ್ತಿದೆ. ಭಾರತವನ್ನು ಹೆಚ್ಚು ವ್ಯಾಪಾರ ಸ್ನೇಹಿಯನ್ನಾಗಿ ಮಾಡಲು ಕಾರ್ಯವಿಧಾನಗಳನ್ನು ಸರಳೀಕರಿಸಲಾಗುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಸಿಡ್ನಿಯಲ್ಲಿ ಇಂದು ಆಸ್ಟ್ರೇಲಿಯಾದ ಸಹಾಯಕ ರಕ್ಷಣಾ ಸಚಿವ ಪೀಟರ್ ಖಲೀಲ್ ಅವರೊಂದಿಗಿನ ದ್ವಿಪಕ್ಷೀಯ ಸಭೆಯಲ್ಲಿ ಮಾತನಾಡಿದ ರಾಜನಾಥ್ ಸಿಂಗ್, ಕಳೆದ ವರ್ಷ ಭಾರತದ ರಕ್ಷಣಾ ರಫ್ತು ಸುಮಾರು ೨೩ ಸಾವಿರ ೬೨೨ ಕೋಟಿ ರೂಪಾಯಿಗಳನ್ನು ತಲುಪಿದೆ. ಭಾರತೀಯ ಕಂಪನಿಗಳು ಈಗ ಸುಮಾರು ೧೦೦ ದೇಶಗಳಿಗೆ ರಫ್ತು ಮಾಡುತ್ತವೆ ಎಂದು ತಿಳಿಸಿದರು.

**ಧ್ವನಿ : ರಾಜನಾಥ್ ಸಿಂಗ್**

ಪ್ರೊಪಲ್ಷನ್ ತಂತ್ರಜ್ಞಾನಗಳು, ಸ್ವಾಯತ್ತ ನೀರೊಳಗಿನ ವಾಹನಗಳು, ಫ್ಲೈಟ್ ಸಿಮ್ಯುಲೇಟರ್‌ಗಳು ಮತ್ತು ಸುಧಾರಿತ ಸಾಮಗ್ರಿಗಳು ಸೇರಿದಂತೆ ಉನ್ನತ-ಮಟ್ಟದ ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸಲು ಮತ್ತು ಉತ್ಪಾದಿಸಲು ಭಾರತೀಯ ಉದ್ಯಮದೊಂದಿಗೆ ಪಾಲುದಾರಿಕೆ ಮಾಡಿಕೊಳ್ಳಲು ಆಸ್ಟ್ರೇಲಿಯಾದ ಕಂಪನಿಗಳನ್ನು ಸಚಿವ ರಾಜನಾಥ್ ಸಿಂಗ್ ಸ್ವಾಗತಿಸಿದರು. ಈ ವರ್ಷದ ಕೊನೆಯಲ್ಲಿ, ಕ್ವಾಂಟಮ್ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಸೈಬರ್ ಭದ್ರತೆ, ಮಾಹಿತಿ ಯುದ್ಧ ಹಾಗೂ ಮುಂದುವರಿದ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸಹಯೋಗವನ್ನು ಅನ್ವೇಷಿಸಲಾಗುವುದು ಎಂದು ಅವರು ಹೇಳಿದರು.

<><><><>

ಬಿಹಾರದಲ್ಲಿ ಮೊದಲ ಹಂತದ ವಿಧಾನಸಭಾ ಚುನಾವಣೆಗೆ ಇಂದು ಅಧಿಸೂಚನೆ ಹೊರಡಿಸಿದೆ. ಈ ಮೂಲಕ ಮೊದಲ ಹಂತಕ್ಕೆ ನಾಮಪತ್ರ ಸಲ್ಲಿಕೆ ಆರಂಭವಾಗಿದೆ. ೨೪೩ ಸದಸ್ಯ ಬಲದ ಬಿಹಾರ ವಿಧಾನಸಭೆಗೆ ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ನವೆಂಬರ್ ೬ ರಂದು ೧೨೧ ಸ್ಥಾನಗಳಿಗೆ, ಮೊದಲ ಹಂತದ ಮತದಾನ ನಡೆಯಲಿದೆ. ಈ ತಿಂಗಳ ೧೭ ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ನವೆಂಬರ್ ೧೧ ರಂದು ಎರಡನೇ ಹಂತದಲ್ಲಿ ೧೨೨ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಬಿಹಾರ ವಿಧಾನಸಭಾ

ಚುನಾವಣೆಯ ಸಮಯದಲ್ಲಿ ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಸುಮಾರು ಎಂಟು ಲಕ್ಷ ೫೦ ಸಾವಿರ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಸುಮಾರು ನಾಲ್ಕು ಲಕ್ಷ ೫೩ ಸಾವಿರ ಚುನಾವಣಾ ಸಿಬ್ಬಂದಿ, ಎರಡು ಲಕ್ಷ ೫೦ ಸಾವಿರ ಪೊಲೀಸ್ ಅಧಿಕಾರಿಗಳು, ೨೮ ಸಾವಿರಕ್ಕೂ ಹೆಚ್ಚು ಎಣಿಕೆ ಸಿಬ್ಬಂದಿ, ೧೮ ಸಾವಿರ ಸೂಕ್ಷ್ಮ ವೀಕ್ಷಕರನ್ನು ನೇಮಿಸಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಬಿಹಾರದಲ್ಲಿ ಮೊದಲ ಬಾರಿಗೆ ೨೪೩ ಕ್ಷೇತ್ರಗಳಿಗೆ ತಲಾ ಒಬ್ಬ ಸಾಮಾನ್ಯ ವೀಕ್ಷಕರನ್ನು ನಿಯೋಜಿಸಲಾಗಿದೆ. ಅಲ್ಲದೇ, ೩೮ ಪೊಲೀಸ್ ವೀಕ್ಷಕರು ಮತ್ತು ೬೭ ಖರ್ಚು ವೀಕ್ಷಕರನ್ನು ಸಹ ನಿಯೋಜಿಸಲಾಗಿದೆ. ಈ ವೀಕ್ಷಕರು ಆಯಾ ಕ್ಷೇತ್ರಗಳಲ್ಲಿ, ಯಾವುದೇ ಸಮಸ್ಯೆಗಳನ್ನು ಪರಿಹರಿಸಲು ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳೊಂದಿಗೆ ನಿಯಮಿತವಾಗಿ ಸಭೆ ನಡೆಸುತ್ತಾರೆ. ೯೦ ಸಾವಿರದ ೭೧೨ ಬೂತ್ ಮಟ್ಟದ ಅಧಿಕಾರಿಗಳು ಮತ್ತು ೨೪೩ ಚುನಾವಣಾ ನೋಂದಣಿ ಅಧಿಕಾರಿಗಳನ್ನು ಒಳಗೊಂಡ ಚುನಾವಣಾ ಯಂತ್ರೋಪಕರಣಗಳು, ಮತದಾರರಿಗೆ ಫೋನ್ ಕರೆ ಮತ್ತು ಇಸಿಐ ನೆಟ್ ಅಪ್ಲಿಕೇಶನ್‌ನಲ್ಲಿ, ಬುಕ್-ಎ-ಕಾಲ್ ಸೌಲಭ್ಯ ಲಭ್ಯವಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

<><><><>

ಮತದಾರರ ಪಟ್ಟಿಯಲ್ಲಿರುವ ಮತದಾರರು, ಮತದಾರರ ಫೋಟೋ ಗುರುತಿನ ಚೀಟಿ ಹೊರತುಪಡಿಸಿ, ೧೨ ಪರ್ಯಾಯ ಫೋಟೋ ಐಡಿಗಳಲ್ಲಿ ಯಾವುದನ್ನಾದರೂ ಪ್ರದರ್ಶಿಸಬಹುದು ಎಂದು ಚುನಾವಣಾ ಆಯೋಗ ಹೇಳಿದೆ. ಈ ಐಡಿಗಳಲ್ಲಿ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ಪಾಸ್‌ಪೋರ್ಟ್, ಚಾಲನಾ ಪರವಾನಗಿ ಮತ್ತು ಬ್ಯಾಂಕ್ ಅಥವಾ ಅಂಚೆ ಕಚೇರಿಯಿಂದ ನೀಡಲಾದ ಛಾಯಾಚಿತ್ರದೊಂದಿಗೆ ಪಾಸ್‌ಬುಕ್‌ಗಳು ಸೇರಿವೆ. ಬಿಹಾರದಲ್ಲಿ ಮತ್ತು ಉಪಚುನಾವಣೆಗಳು ನಡೆಯುತ್ತಿರುವ ವಿವಿಧ ರಾಜ್ಯಗಳ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಸುಮಾರು ನೂರು ಪ್ರತಿಶತ ಮತದಾರರಿಗೆ ಗುರುತಿನ ಚೀಟಿಗಳನ್ನು ನೀಡಲಾಗಿದೆ. ಮತದಾರರ ಪಟ್ಟಿಯ ಅಂತಿಮ ಪ್ರಕಟಣೆಯ ೧೫ ದಿನಗಳ ಒಳಗೆ ಹೊಸ ಮತದಾರರಿಗೆ ಗುರುತಿನ ಚೀಟಿಗಳನ್ನು ತಲುಪಿಸುವುದನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ಮುಖ್ಯ ಚುನಾವಣಾ ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಿರುವುದಾಗಿ ಚುನಾವಣಾ ಆಯೋಗ ತಿಳಿಸಿದೆ.

<><><><>

ವಿಶ್ವ ಮಾನಸಿಕ ಆರೋಗ್ಯ ದಿನವನ್ನು ಇಂದು ಜಗತ್ತಿನಾದ್ಯಂತ ಆಚರಿಸಲಾಗುತ್ತಿದೆ. ಮಾನಸಿಕ ಆರೋಗ್ಯ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ವಿಶ್ವಾದ್ಯಂತ ಮಾನಸಿಕ ಆರೋಗ್ಯ ರಕ್ಷಣೆಯನ್ನು ಬೆಂಬಲಿಸಲು ಪ್ರಯತ್ನಗಳನ್ನು ಸಜ್ಜುಗೊಳಿಸುವುದು ಈ ದಿನದ ಗುರಿಯಾಗಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ, ಈ ದಿನವು ಜನರು ತಮ್ಮ ಭಾವನಾತ್ಮಕ ಮತ್ತು ಮಾನಸಿಕ ಯೋಗಕ್ಷೇಮಕ್ಕೆ ಆದ್ಯತೆ ನೀಡಲು ನೆನಪಿಸುತ್ತದೆ. ಈ ದಿನವು ಜಾಗೃತಿ ಮೂಡಿಸಲು ಮತ್ತು ಮಾನಸಿಕ ಆರೋಗ್ಯದ ಬಗ್ಗೆ ಮುಕ್ತ ಸಂಭಾಷಣೆಗಳನ್ನು ಪ್ರೋತ್ಸಾಹಿಸಲು ಅವಕಾಶವನ್ನು ನೀಡುತ್ತದೆ ಎಂದು ಹೇಳಿದರು. 'ಸೇವೆಗಳಿಗೆ ಪ್ರವೇಶ - ವಿಪತ್ತುಗಳು ಮತ್ತು ತುರ್ತು ಪರಿಸ್ಥಿತಿಗಳಲ್ಲಿ ಮಾನಸಿಕ ಆರೋಗ್ಯ' ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ. ತುರ್ತು ಸಂದರ್ಭಗಳಲ್ಲಿ ಬೆಂಬಲ ವ್ಯವಸ್ಥೆಗಳು ಲಭ್ಯವಿರುವುದನ್ನು ಖಚಿತಪಡಿಸಿಕೊಳ್ಳುವ ಅಗತ್ಯವನ್ನು ಇದು ಎತ್ತಿ ತೋರಿಸುತ್ತದೆ ಎಂದು ಸಚಿವರು ಹೇಳಿದರು. ಎಲ್ಲರಿಗೂ ಆರೈಕೆ, ತಿಳುವಳಿಕೆ ಮತ್ತು ಮಾನಸಿಕ ಆರೋಗ್ಯ

ಸೇವೆಗಳಿಗೆ ಸಕಾಲಿಕ ಪ್ರವೇಶವನ್ನು ಉತ್ತೇಜಿಸುವ ಸಮಾಜವನ್ನು ನಿರ್ಮಿಸಲು ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು ಎಂದು ಸಚಿವ ಜೆ.ಪಿ. ನಡ್ಡಾ ಮನವಿ ಮಾಡಿದರು.

<><><><>

ಭಾರತೀಯ ರಿಸರ್ವ್ ಬ್ಯಾಂಕಿನ ಡೆಪ್ಯೂಟಿ ಗೌರ್ನರ್ ಆಗಿ ಶಿರೀಶ್ ಚಂದ್ರ ಮುರ್ಮು, ಮೂರು ವರ್ಷಗಳ ಅವಧಿಗೆ ಅಧಿಕಾರ ವಹಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ, ಶಿರೀಶ್ ಚಂದ್ರ ಮುರ್ಮು ಅವರು, ರಿಸರ್ವ್ ಬ್ಯಾಂಕಿನ ಕಾರ್ಯನಿರ್ವಾಹಕ ನಿರ್ದೇಶಕರಾಗಿದ್ದರು. ಡೆಪ್ಯೂಟಿ ಗೌರ್ನರ್ ಶಿರೀಶ್ ಚಂದ್ರ ಮುರ್ಮು, ಸಂವಹನ ಇಲಾಖೆ, ಸರ್ಕಾರಿ ಮತ್ತು ಬ್ಯಾಂಕ್ ಖಾತೆಗಳ ಇಲಾಖೆ, ನಿಯಂತ್ರಣ ಮತ್ತು ಜಾರಿ ಇಲಾಖೆಯ ಮೇಲ್ವಿಚಾರಣೆಯ ಜವಾಬ್ದಾರಿ ವಹಿಸಲಿದ್ದಾರೆ.

<><><><>

ಜೀವವೈವಿಧ್ಯ ಸಂರಕ್ಷಣೆಯನ್ನು ಬಲಪಡಿಸಲು ಭಾರತ, ಅಬುಧಾಬಿಯಲ್ಲಿ ನಡೆದ ವಿಶ್ವ ಸಂರಕ್ಷಣಾ ಶೃಂಗಸಭೆಯಲ್ಲಿ, ಮುಂದಿನ ಐದು ವರ್ಷಗಳ ತನ್ನ ರಾಷ್ಟ್ರೀಯ ಕೆಂಪು ಪಟ್ಟಿ ಮಾರ್ಗಸೂಚಿಯನ್ನು ಅನಾವರಣಗೊಳಿಸಿತು. ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಕೆಂಪು ಪಟ್ಟಿ ಮಾರ್ಗಸೂಚಿಯನ್ನು ಪ್ರಕಟಿಸಿದರು. ಈ ಕೆಂಪು ಪಟ್ಟಿಯು, ೨೦೩೦ ರವರೆಗೆ ದೇಶದ ಸಂರಕ್ಷಣಾ ಕಾರ್ಯತಂತ್ರಕ್ಕೆ ಮಾರ್ಗದರ್ಶನ ನೀಡುತ್ತದೆ ಹಾಗೂ ಕೇಂದ್ರೀಕೃತ ರಕ್ಷಣಾ ಪ್ರಯತ್ನಗಳಿಗಾಗಿ ಅಳಿವಿನಂಚಿನಲ್ಲಿರುವ ಪ್ರಭೇದಗಳನ್ನು ಗುರುತಿಸಲು ಸಹಾಯ ಮಾಡುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್, ಕೆಂಪು ಪಟ್ಟಿಯಂತಹ ವೈಜ್ಞಾನಿಕ ದಾಖಲಾತಿಗಳು, ಆದ್ಯತೆಗಳನ್ನು ಗುರುತಿಸುವಲ್ಲಿ ಮತ್ತು ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ನಿರ್ದೇಶಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದು ಹೇಳಿದರು. ವಿಶ್ವದ ೧೭ ಬೃಹತ್ ವೈವಿಧ್ಯಮಯ ದೇಶಗಳಲ್ಲಿ ಒಂದಾದ ಭಾರತ, ನಾಲ್ಕು ಜಾಗತಿಕ ಜೀವವೈವಿಧ್ಯ ತಾಣಗಳು ಮತ್ತು ೨೦ ಸಾವಿರಕ್ಕೂ ಹೆಚ್ಚು ಸಮುದ್ರ ಪ್ರಭೇದಗಳನ್ನು ಒಳಗೊಂಡಂತೆ, ಸಾವಿರಾರು ಸ್ಥಳೀಯ ಪ್ರಭೇದಗಳಿಗೆ ನೆಲೆಯಾಗಿದೆ. ಜಾಗತಿಕ ಮಾನದಂಡಗಳಿಗೆ ಅನುಗುಣವಾಗಿರುವ ಕೆಂಪು ಪಟ್ಟಿ ಉಪಕ್ರಮವು, ೨೦೩೦ ರ ವೇಳೆಗೆ, ಪುರಾವೆ ಆಧಾರಿತ ಸಂರಕ್ಷಣಾ ನೀತಿಗಳು ಮತ್ತು ರಾಷ್ಟ್ರೀಯ ಕೆಂಪು ದತ್ತಾಂಶ ಪುಸ್ತಕಗಳ ಪ್ರಕಟಣೆಯನ್ನು ಬೆಂಬಲಿಸುತ್ತದೆ.

<><><><>

ಕರಾವಳಿ ಕರ್ನಾಟಕ, ಆಂಧ್ರಪ್ರದೇಶ, ಕೇರಳ, ಮಾಹೆ, ಒಡಿಶಾ, ದಕ್ಷಿಣ ಒಳನಾಡು ಕರ್ನಾಟಕ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ವೇಳೆ ಅಸ್ಸಾಂ, ನಾಗಾಲ್ಯಾಂಡ್, ಮಣಿಪುರ, ಮೇಘಾಲಯ, ಮಿಜೋರಾಂ ಮತ್ತು ತ್ರಿಪುರಗಳಲ್ಲಿ ಇಂದು ತೀವ್ರ ಮಳೆಯಾಗುವ ನಿರೀಕ್ಷೆ ಇದೆ. ಮುಂದಿನ ಎರಡು ದಿನಗಳವರೆಗೆ ಪಶ್ಚಿಮ ಬಂಗಾಳ, ಲಕ್ಷದ್ವೀಪ ಮತ್ತು ತೆಲಂಗಾಣದಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><><>

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಎರಡನೇ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ಮತ್ತು ವೆಸ್ಟ್ ಇಂಡೀಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಭಾರತ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿಯಂತೆ, ಭಾರತ ಮೊದಲ ಇನ್ನಿಂಗ್ಸ್‌ನಲ್ಲಿ ೧ ವಿಕೆಟ್ ನಷ್ಟಕ್ಕೆ ೧೭೫ರನ್ ಮಾಡಿ ಆಡುತ್ತಿದೆ. ಶುಭಮನ್ ಗಿಲ್ ನೇತೃತ್ವದ ಭಾರತ ತಂಡ, ಅಹಮದಾಬಾದ್‌ನಲ್ಲಿ ನಡೆದ ಸರಣಿಯ ಆರಂಭಿಕ ಪಂದ್ಯದಲ್ಲಿ ನಿರ್ಣಾಯಕ ಜಯ ಗಳಿಸಿದ ನಂತರ, ಈ ಪಂದ್ಯವನ್ನೂ ಗೆದ್ದು, ಸರಣಿಯನ್ನು ಕ್ಲೀನ್ ಸ್ವೀಪ್ ಮಾಡಲು ತವಕಿಸುತ್ತಿದೆ.

<><><><>

ಅಸ್ಸಾಂನ ಗುವಾಹಟಿಯಲ್ಲಿರುವ ನ್ಯಾಷನಲ್ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ನಡೆದ ಬಿಡಬ್ಲ್ಯೂಎಫ್ ವಿಶ್ವ ಜೂನಿಯರ್ ಮಿಶ್ರ ತಂಡ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ ಕ್ವಾರ್ಟರ್ ಫೈನಲ್‌ನಲ್ಲಿ ಭಾರತ, ಕೊರಿಯಾ ತಂಡವನ್ನು ಪರಾಭವಗೊಳಿಸಿದೆ.  ಈ ಐತಿಹಾಸಿಕ ಗೆಲುವಿನೊಂದಿಗೆ ಭಾರತ, ಇತಿಹಾಸದಲ್ಲೇ ತನ್ನ ಮೊದಲ ಮಿಶ್ರ-ತಂಡ ಪದಕವನ್ನು ಖಚಿತಪಡಿಸಿದೆ. ಭಾರತ ೪೪-೪೫, ೪೫-೨೦, ೪೫-೨೨ ಅಂತರದಿಂದ ಕೊರಿಯಾ ತಂಡವನ್ನು ಸೋಲಿಸಿ, ಸೆಮಿಫೈನಲ್‌ಗೆ ಮುನ್ನಡೆಯಿತು. ಭಾರತದ ಗೆಲುವಿನಲ್ಲಿ ಉನ್ನತಿ ಹೂಡಾ ನಿರ್ಣಾಯಕ ಪಾತ್ರ ವಹಿಸಿದರು. ಇಂದು ಸೆಮಿಫೈನಲ್‌ನಲ್ಲಿ ಭಾರತ, ಹಾಲಿ ಚಾಂಪಿಯನ್ ಇಂಡೋನೇಷ್ಯಾ ತಂಡದೊಂದಿಗೆ ಸೆಣಸಾಟ ನಡೆಸುತ್ತಿದ್ದು, ಪಂದ್ಯ ಪ್ರಗತಿಯಲ್ಲಿದೆ. ಇದೇ ಸ್ಥಳದಲ್ಲಿ ಸಂಜೆ ೪ ಗಂಟೆಯಿಂದ ಚೀನಾ ಮತ್ತು ಜಪಾನ್ ನಡುವೆ ಮತ್ತೊಂದು ಸೆಮಿಫೈನಲ್ ಹಣಾಹಣಿ ನಡೆಯಲಿದೆ.

<><><><>

ಗುವಾಹಟಿಯ ಬರ್ಸಾಪರ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ನ್ಯೂಜಿಲೆಂಡ್ ಮತ್ತು ಬಾಂಗ್ಲಾದೇಶ ವನಿತಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೨ ಗಂಟೆಗೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>